ಬೈಂದೂರು ಸಮುದಾಯ ಆರೋಗ್ಯ ಕೇಂದ್ರವಾಗಿ ಮಂಜೂರಾಗಿರುವುದು.

1410 (1653)

ಶ್ರೀ ಕೆ.ಗೋಪಾಲ ಪೂಜಾರಿ (ಬೈಂದೂರು): ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಿನಾಂಕ 14.10.94ರಂದು ಸರ್ಕಾರ ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಿ (ಆದೇಶ ಸಂಖ್ಯೆ: ಆಕುಕ 194) ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈವರೆಗೂ ಸದರಿ ಆದೇಶ ಕಾರ್ಯಗತವಾಗದಿರಲು ಕಾರಣಗಳೇನು?

ಇ) 14.10.94ರ ಆದೇಶವನ್ನು ಕಾರ್ಯಗತಗೊಳಿಸಲು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳು ಯಾವುವು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಬಂದಿದೆ

ಆ) ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರಿಂದ ಬಂದ ಶಿಫಾರಸ್ಸುಗಳನ್ನು ಹಾಗೂ ಸಾರ್ವಜನಿಕರಿಂದ ಬಂದ ಕೋರಿಕೆಗಳನ್ನು ಪುನರ್ ಪರಿಶೀಲಿಸಿ 11 ಸಮುದಾಯ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಿ ದಿನಾಂಕ 20.3.95ರಂದು ಸರ್ಕಾರದ ಆದೇಶ ಸಂಖ್ಯೆ: ಆಕುಕ 194 ಸಿಜಿಎಮ್ 94 ಹೊರಡಿಸಲಾಗಿದೆ.

ಇ) ಉದ್ಭವಿಸುವುದಿಲ್ಲ.

ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕುಟುಂಬ ಕಲ್ಯಾಣ ಶಸ್ತ್ರ ಚಿಕಿತ್ಸೆ ನಡೆಯದಿರುವುದು.

1411 (1654)

ಶ್ರೀ ಕೆ.ಗೋಪಾಲ ಪೂಜಾರಿ (ಬೈಂದೂರು): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇದುವರೆಗೂ ಕುಟುಂಬ ಕಲ್ಯಾಣ ಶಸ್ತ್ರ ಚಿಕಿತ್ಸೆ ನಡೆಸದಿರುವುದರಿಂದ, ಬಡ ಕುಟುಂಬದವರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಕುಟುಂಬ ಕಲ್ಯಾಣ ಶಸ್ತ್ರ ಚಿಕಿತ್ಸೆ ನಡೆಸಲು ಸರ್ಕಾರ ಎಂದು ಕ್ರಮ ಕೈಗೊಳ್ಳಲಾಗುವುದು?

ಇ) ಹಾಗಿದ್ದಲ್ಲಿ ಇದಕ್ಕೆ ಕಾರಣವೇನು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು): ಅ) ಬಂದಿದೆ, ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ತರಬೇತಿ ಹೊಂದಿದ ವೈದ್ಯಾಧಿಕಾರಿಗಳು ಇಲ್ಲದಿರುವುದರಿಂದ, ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇತ್ತೀಚಿಗೆ ಸಂತಾನ ನಿರೋಧ ಶಸ್ತ್ರ ಚಿಕಿತ್ಸೆ ಮಾಡುತ್ತಿಲ್ಲ. ಆದರೆ, ಶಸ್ತ್ರ ಚಿಕಿತ್ಸೆಯನ್ನು ಕುಂದಾಪುರ ಸರ್ಕಾರಿ ಆಸ್ಪತ್ರೆಯಲ್ಲಿ ಮಾಡುತ್ತಿದ್ದು, ಅಂತಹವರನ್ನು ಆಸ್ಪತ್ರೆಗೆ ಇಲಾಖೆಯ ವಾಹನದಲ್ಲಿ ಕರೆದುಕೊಂಡು ಹೋಗಿ, ಸಂತಾನ ನಿರೋಧ ಶಸ್ತ್ರ ಚಿಕಿತ್ಸೆಯ ನಂತರ ಅವರನ್ನು ಇಲಾಖೆಯ ವಾಹನದಲ್ಲಿಯೇ ಅವರ ಮನೆಗೆ ಬಿಡಲಾಗುವುದು.

ಆ ಮತ್ತು ಇ) ವೈದ್ಯಾಧಿಕಾರಿಗಳಿಗೆ ತರಬೇತಿಯಾದ ಕೂಡಲೇ ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕುಟುಂಬ ಕಲ್ಯಾಣ ಶಸ್ತ್ರ ಚಿಕಿತ್ಸೆ ನಡೆಸಲು ಕ್ರಮ ಕೈಗೊಳ್ಳಲಾಗುವುದು. ಅಲ್ಲಿಯವರೆಗೆ ಸಂತಾನ ನಿರೋಧ ಶಸ್ತ್ರ ಚಿಕಿತ್ಸೆ ನಡೆಯುವ ಸಮಯದಲ್ಲಿ ತರಬೇತಿ ಹೊಂದಿದ ವೈದ್ಯಾಧಿಕಾರಿಗಳನ್ನು ನಿಯೋಜಿಸಲಾಗುವುದು.

ಹುಬ್ಬಳ್ಳಿಯ ಕೆ.ಎಂ.ಸಿ. (ಕಿಮ್ಸ್) ಸಂಸ್ಥೆ

14 12 (2006)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಕೆಎಂಸಿ ಸಂಸ್ಥೆಯ ಫಾರ್ಮಸಿ ವಿಭಾಗ ಉತ್ಪಾದನೆ ನಿಲ್ಲಿಸಲು ಕಾರಣಗಳೇನು?

ಆ) ಈ ಉತ್ಪಾದನೆ ಕಾರ್ಯವನ್ನು ಪುನರ್ ಪ್ರಾರಂಭಿಸಲು ಸರ್ಕಾರ ಕೈಗೊಂಡ